ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016–17 ದಿನಾಂಕ: 04–02–2017

## ಪತ್ರಿಕಾ ಆಮಂತ್ರಣ

1. **Launch of Measles Rubella(MR) Vaccination Campaign**

**Chief Guest:**

**Jagat Prakash Nadda,**
**Union Minister, Health and Family Welfare**

**Shri Sadananda Gowda,**
**Union Minister of Statistics and Programme Implementation**

**Ananth Kumar,**
**Union Minister of Chemicals and Fertilizers, Parliamentary Affaris**
**Shri Faggan Singh Kulaste**
**Union Minister of State, Ministry of Health and Family Welfare**

**K.R. Ramesh Kumar,**
**Minister of Health and Family Welfare, Govt. of Karnataka**
**Tanveer Sait,**
**Minister of Primary and Secondary Education Govt. of Karnataka**
**Dr. Sharanprakash Rudrappa Patil,**
**Minister of Medical Education, Govt. of Karnataka**
**Smt. Umashree,**
**Minister of Women and Child Development, Government of Karnataka**

**Date: 5-2-2017 Sunday at 12.00 noon**
**Place: Vidhana Soudha, Banquet Hall, Bengaluru**

1. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ದಡಾರ–ರುಬೆಲ್ಲಾ ಅಭಿಯಾನಕ್ಕೆ ಚಾಲನೆ:

ಸಿ.ಕೆ. ಮಿಶ್ರಾ, ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ಕೇಂದ್ರ ಸರ್ಕಾರ ಮತ್ತು
ಸುಬಾಷ್ ಚಂದ್ರ ಕುಂಟಿಯಾ, ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ

ಮುಖ್ಯ ಅತಿಥಿಗಳು:

ಜಗತ್ ಪ್ರಕಾಶ್ ನಡ್ಡಾ, ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

ಕೆ.ಆರ್.ರಮೇಶ್‌ಕುಮಾರ್, ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

ದಿನಾಂಕ: 05–02–2017, ಭಾನುವಾರ, ಸಮಯ: ಮಧ್ಯಾಹ್ನ 12.00 ಗಂಟೆಗೆ

ಸ್ಥಳ: ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳೂರು.

3. ಜಂಟಿ ಪತ್ರಿಕಾಗೋಷ್ಠಿ:
ಕಲಾಕ್ಷೇತ್ರ–50 ಸುವರ್ಣ ಸಂಭ್ರಮ–ನೆನಪಿನೋಕುಳಿ ಸಂಚಿಕೆ –6 ರ"ನೃತ್ಯಾದಿತ್ಯ" ನೃತ್ಯ ಕಾರ್ಯಕ್ರಮ ಕುರಿತು

ಕೆ.ಎ. ದಯಾನಂದ, ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
ಶ್ರೀನಿವಾಸ ಜಿ. ಕಪ್ಪಣ್ಣ, ಸಾಂಸ್ಕೃತಿಕ ಸಮಿತಿಯ ಅಧ್ಯಕ್ಷರು.

ದಿನಾಂಕ: 06–02–2017 ಸೋಮವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ.

ಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ.ಸಿ.ರಸ್ತೆ, ಬೆಂಗಳೂರು.

## ಪತ್ರಿಕಾ ಪ್ರಕಟಣೆ

## ದಡಾರ ನಿರ್ಮೂಲನೆ ಹಾಗೂ ರುಬೆಲ್ಲಾ ನಿಯಂತ್ರಣಕ್ಕೆ ಸಕಲ ಸಿದ್ಧತೆ

ಬೆಂಗಳೂರು, ಫೆಬ್ರವರಿ 4 , (ಕರ್ನಾಟಕ ವಾರ್ತೆ)

ಭಾರತ ಸರ್ಕಾರವು ದಢಾರ ಮತ್ತು ರುಬೆಲ್ಲಾ ಅಭಿಯಾನವನ್ನು ಹಮ್ಮಿಕೊಳ್ಳಲು ಮೊದಲನೇ ಹಂತದಲ್ಲಿ ಕರ್ನಾಟಕ ರಾಜ್ಯವನ್ನು ಆಯ್ಕೆ ಮಾಡಿಕೊಂಡಿದೆ. ಇದರ ಜೊತೆಗೆ

ತಮಿಳುನಾಡು, ಪಾಂಡಿಚೇರಿ, ಲಕ್ಷದ್ವೀಪ ಮತ್ತು ಗೋವ ರಾಜ್ಯಗಳನ್ನು ಸಹ ಆಯ್ಕೆ ಮಾಡಿಕೊಂಡಿದೆ.

ಈಶಾನ್ಯ ಏಷ್ಯಾ ಖಂಡದ ದೇಶಗಳ ಸಂಕಲ್ಪದಂತೆ (**WHO-SEAR resolution**) ಭಾರತ ದೇಶವು **2020** ರ ವೇಳೆಗೆ ದಡಾರ ನಿರ್ಮೂಲನೆ ಹಾಗೂ ರುಬೆಲ್ಲಾ ನಿಯಂತ್ರಣಕ್ಕೆ ಬದ್ಧವಾಗಿರುತ್ತದೆ.

ಭಾರತ ಸರ್ಕಾರವು ಫೆಬ್ರವರಿ **7** ರಿಂದ **28, 2017** ರವರೆಗೆ ದಡಾರ – ರುಬೆಲ್ಲಾ ಲಸಿಕಾ ಅಭಿಯಾನ ಆಯೋಜಿಸಲು ತೀರ್ಮಾನಿಸಿದೆ.  ಈ ಲಸಿಕಾ ಅಭಯಾನದಲ್ಲಿ **9** ತಿಂಗಳ ವಯಸ್ಸಿನಿಂದ **15** ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಒಂದು ದಡಾರ – ರುಬೆಲ್ಲಾ ಲಸಿಕೆಯನ್ನು (**MR Vaccine**) ನೀಡಬೇಕಾಗಿರುತ್ತದೆ.

ಈ ಅಭಿಯಾನಕ್ಕೆ  ನಮ್ಮ ರಾಜ್ಯ **1.65** ಕೋಟಿ ಮಕ್ಕಳ ಗುರಿ ಹೊಂದಿದೆ.

ದಢಾರ ಮತ್ತು ರುಬೆಲ್ಲಾ ಅಭಿಯಾನವನ್ನು **7**ನೇ ಫೆಬ್ರವರಿ **2017** ರಿಂದ **28** ನೇ ಫೆಬ್ರವರಿ **2017** ರವರೆಗೆ ಮೂರು ವಾರಗಳ ಕಾಲ ಎಲ್ಲಾ ಫಲಾನುಭವಿಗಳೀಗೆ ಲಸಿಕೆ ದೊರೆಯುವಂತೆ ನೋಡಿಕೊಳ್ಳುವುದು ನಮ್ಮ ಗುರಿಯಾಗಿದೆ ಹಾಗೂ ಎಲ್ಲಾ ಮಕ್ಕಳು ಈ ಮೊದಲು ಲಸಿಕೆಯನ್ನು ಪಡೆದಿದ್ದರೂ ಸಹ ಅಭಿಯಾನ ನಡೆಯುವ ಮೂರು ವಾರಗಳ ಸಮಯದಲ್ಲಿ ದಢಾರ ಮತ್ತು ರುಬೆಲ್ಲಾ ಲಸಿಕೆಯನ್ನು ತಪ್ಪದೇ ಪಡೆಯುವುದು. ಈ ರೋಗವನ್ನು ತೊಡೆದುಹಾಕಲು ಅಭಿಯಾನದಲ್ಲಿ ಶೇ **95** ರಷ್ಟು ಗುರಿ ಸಾಧಿಸಬೇಕಾಗಿದೆ.

ಈ  ಅಭಿಯಾನವನ್ನು ರಾಜ್ಯದ ಎಲ್ಲಾ ಆರೋಗ್ಯ ಸಂಸ್ಥೆಗಳು, ಶಾಲೆಗಳು ಅಂಗನವಾಡಿ ಕೇಂದ್ರಗಳು, ಹಳ್ಳಿಗಳು, ಪಟ್ಟಣ ಪ್ರದೇಶ ಹಾಗೂ ಮೊಹಲ್ಲಾಗಳಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ ಕೊರಚೆ ಪ್ರದೇಶದಲ್ಲಿ ವಾಸಿಸುವ ಕುಟುಂಬದ ಮಕ್ಕಳು, ವಲಸೆ ಬಂದಿರುವವರ ಮಕ್ಕಳು,  ಕಟ್ಟಡ ನಿರ್ಮಾಣ ಮತ್ತು ಇಟ್ಟಿಗೆ ಕಾರ್ಖಾನೆಗಳಲ್ಲಿ ಕೆಲಸ ಮಾಡುವವರ ಕುಟುಂಬದ ಎಲ್ಲಾ ಮಕ್ಕಳನ್ನು ಗುರುತಿಸಿ ಲಸಿಕೆ ನೀಡಲಾಗುವುದು.

ಇತರೆ ಸಂಬಂಧಪಟ್ಟ ಇಲಾಖೆಗಳಾದ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಕಾರ್ಮಿಕ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಪಂಚಾಯತ್ ರಾಜ್ ಇಲಾಖೆ, ರಕ್ಷಣಾ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಗ್ರಾಮೀಣಾಭಿವೃದ್ಧಿ ಇಲಾಖೆ, ಸಾರಿಗೆ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಮತ್ತು ಇತರ ಇಲಾಖೆಗಳ ಸಹಕಾರ ಪ್ರಮುಖವಾಗಿರುತ್ತದೆ.

**WHO, UNICEF, Indian Academy Pediatrics, Indian Medical Association, Rotary, Lions, Red Cross and Private School Association Management** ರವರುಗಳ ಸಹಕಾರದೊಂದಿಗೆ ಅಭಿಯಾನವನ್ನು

ನಡೆಸಲಾಗುತ್ತದೆ.  2020 ರ ವೇಳೆಗೆ ದಡಾ ನಿರ್ಮೂಲನೆ ಮಾಡುವ ಗುರಿ ಹೊಂದಲಾಗಿದೆ.

ಕೆಎನ್‌ಕೆ :ಜಿಪಿಆರ್.

## ಫೆಬ್ರವರಿ 6 ರಂದು
## ವಿಧಾನ ಮಂಡಲದ ಜಂಟಿ ಅಧಿವೇಶನ ಆರಂಭ

ಬೆಂಗಳೂರು, ಫೆಬ್ರವರಿ 4 , (ಕರ್ನಾಟಕ ವಾರ್ತೆ)

ಫೆಬ್ರವರಿ 6 ರಂದು ಬೆಳಿಗ್ಗೆ 11.00 ಗಂಟೆಗೆ ರಾಜ್ಯಪಾಲರ ಭಾಷಣದೊಂದಿಗೆ ವಿಧಾನಮಂಡಲದ ಜಂಟಿ ಅಧಿವೇಶನ ಪ್ರಾರಂಭವಾಗಲಿದೆ ಎಂದು ವಿಧಾನ ಪರಿಷತ್ತಿನ ಸಭಾಪತಿ ಡಿ.ಹೆಚ್. ಶಂಕರಮೂರ್ತಿ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಡಿ.ಹೆಚ್. ಶಂಕರಮೂರ್ತಿ ಅವರು ರಾಜ್ಯಪಾಲರ ಭಾಷಣದ ನಂತರ ಉಭಯ ಸದನಗಳು ಪ್ರತ್ಯೇಕವಾಗಿ ಸೇರಿ ಅಗಲಿದ ಗಣ್ಯರಿಗೆ ಸಂತಾಪ ಸೂಚಿಸಿದ ನಂತರ ದಿನದ ಕಲಾಪವನ್ನು ಮುಂದೂಡಲಾಗುವುದು ಎಂದು ತಿಳಿಸಿದರು.

ಫೆಬ್ರವರಿ 7 ರಿಂದ ಪ್ರಶ್ನೋತ್ತರ ಕಲಾಪಗಳು ಆರಂಭವಾಗಲಿದ್ದು,  ಪ್ರಸ್ತುತ ವಿಧಾನ ಪರಿಷತ್ತಿನ ಅಧಿವೇಶನಕ್ಕೆ 390 ಚುಕ್ಕೆ ಗುರುತಿನ ಪ್ರಶ್ನೆಗಳು ಹಾಗೂ 84 ಚುಕ್ಕೆರಹಿತ ಪ್ರಶ್ನೆಗಳನ್ನು ಈವರೆಗೆ ಸ್ವೀಕರಿಸಲಾಗಿದೆ ಎಂದ ವಿಧಾನ ಪರಿಷತ್ ಸಭಾಪತಿಗಳು. ಸ್ವೀಕೃತ ಚುಕ್ಕೆ ಗುರುತಿನ ಪ್ರಶ್ನೆಗಳಲ್ಲಿ ಬ್ಯಾಲೆಟ್ ಮೂಲಕ 60 ಪ್ರಶ್ನೆಗಳನ್ನು ಚುಕ್ಕೆ ಗುರುತಿನ ಪ್ರಶ್ನೆಗಳಾಗಿ ಹಾಗೂ ಉಳಿದವುಗಳನ್ನು ಚುಕ್ಕೆ ರಹಿತ ಪ್ರಶ್ನೆಗಳಾಗಿ ಪರಿಗಣಿಸಲಾಗಿದೆ ಎಂದರು.

ಈವರೆಗೆ 62 ಗಮನ ಸೆಳೆಯುವ ಸೂಚನೆಗಳನ್ನು ಹಾಗೂ ನಿಯಮ 330 ರ ಅಡಿ 13 ಸೂಚನೆಗಳನ್ನು ಸ್ವೀಕರಿಸಲಾಗಿದೆ ಎಂದು ಮಾತನಾಡಿದ ಡಿ.ಹೆಚ್. ಶಂಕರಮೂರ್ತಿ ಅವರು ಅಧಿವೇಶನದ ಅವಧಿ ಹೆಚ್ಚು ದಿನ ನಡೆಯಬೇಕು.  ಹೆಚ್ಚು ದಿನ ಅಧಿವೇಶನ ನಡೆದಲ್ಲಿ ಪ್ರಶ್ನೋತ್ತರ ಅವಧಿ ಹಾಗೂ ಬೇರೆ ವಿಚಾರಗಳನ್ನು ಪರಿಪೂರ್ಣವಾಗಿ ಚರ್ಚಿಸಲು ಸಾಧ್ಯವಾಗುತ್ತದೆ ಎಂದು ಈ ಸಂದರ್ಭದಲ್ಲಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಕೆಪಿಪಿ:ಜಿಪಿಆರ್.

## 146 ತಾಲ್ಲೂಕು ಕೇಂದ್ರಗಳಲ್ಲಿ ರಾಜ್ಯ ಸರ್ಕಾರದಿಂದ ಉಚಿತ ಡಯಾಲೀಸಿಸ್ ಕೇಂದ್ರಗಳ ಸ್ಥಾಪನೆ – ಸಚಿವ ರಮೇಶ್ ಕುಮಾರ್.

ಬೆಂಗಳೂರು, ಫೆಬ್ರವರಿ 4 , (ಕರ್ನಾಟಕ ವಾರ್ತೆ)

ರಾಜ್ಯದ 146 ತಾಲ್ಲೂಕು ಕೇಂದ್ರಗಳಲ್ಲಿ ಸರ್ಕಾರ ಉಚಿತ ಡಯಾಲಿಸಿಸ್ ಕೇಂದ್ರಗಳನ್ನು ಸ್ಥಾಪಿಸಲು ಉದ್ದೇಶಿಸಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ.ಆರ್. ರಮೇಶ್‌ಕುಮಾರ್ ಅವರು ಹೇಳಿದರು.

ಇಂದು ಬೆಂಗಳೂರಿನ ಜಯನಗರದ ಸಂಜಯ್ ಗಾಂಧಿ ಆಸ್ಪತ್ರೆ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ 100 ಹಾಸಿಗೆಗಳ ತಾಯಿ ಮಕ್ಕಳ (ಎಂ.ಸಿ.ಹೆಚ್) ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿ ಸಾರ್ವಜನಿಕರ ಆರೋಗ್ಯ ಕಾಪಾಡುವುದು ಸರ್ಕಾರದ ಜವಾಬ್ದಾರಿಯಾಗಿದ್ದು, ಕೇಂದ್ರ ಸರ್ಕಾರ ಪ್ರಾರಂಭಿಸಿರುವ ಪ್ರಧಾನಮಂತ್ರಿ ಜನ ಔಷಧಿ 200 ಮಳಿಗೆಗಳನ್ನು ರಾಜ್ಯಾದ್ಯಂತ ಪ್ರಸಕ್ತ ಸಾಲಿನಲ್ಲಿ ಪ್ರಾರಂಭಿಸುವ ಗುರಿಯನ್ನು ಹೊಂದಿದೆ ಎಂದರು.

ದೇಶದಲ್ಲಿ ಅತಿ ಹೆಚ್ಚು ಮೆಡಿಕಲ್ ಕಾಲೇಜುಗಳನ್ನು ಹೊಂದಿರುವ ರಾಜ್ಯ ಕರ್ನಾಟಕ. ರಾಜ್ಯದಲ್ಲಿ ಈಗ ಒಟ್ಟು 53 ಮೆಡಿಕಲ್ ಕಾಲೇಜುಗಳು ಇದ್ದು 2053 ಪ್ರಾಥಮಿಕ ಆರೋಗ್ಯ ಕೇಂದ್ರಗಳು, 146 ತಾಲ್ಲೂಕು ಮಟ್ಟದ ಸರ್ಕಾರಿ ಆಸ್ಪತ್ರೆಗಳು ಹಾಗೂ 31 ಜಿಲ್ಲಾ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿವೆ. ಸರ್ಕಾರ ಸಾರ್ವಜನಿಕರ ಆರೋಗ್ಯ ಸೇವೆಗಾಗಿ ಈಗಿರುವ ಹನ್ನೊಂದು ವಿವಿಧ ಯೋಜನೆಗಳನ್ನು ಒಂದೇ ವೇದಿಕೆಯಡಿ ತರಲು ನಿರ್ಧರಿಸಿದ್ದು ಶೀಘ್ರದಲ್ಲಿ ಆಧಾರ್ ಕಾರ್ಡ್ ಸಹಾಯದೊಂದಿಗೆ ಯುನಿವರ್ಸಲ್ ಹೆಲ್ತ್ ಕಾರ್ಡ್ ನೀಡಲು ಯೋಜನೆ ರೂಪಿಸಿದೆ.

ಜಯನಗರದ ಸಂಜಯ್ ಗಾಂಧಿ ಆಸ್ಪತ್ರೆಯನ್ನು ಸ್ಥಳಾಂತರಿಸುವ ಕಾರ್ಯ ಪ್ರಾರಂಭವಾಗಲಿದ್ದು ಈಗಿರುವ ಸಾರ್ವಜನಿಕ ಆಸ್ಪತ್ರೆಯನ್ನು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಾಗಿ ಉನ್ನತೀಕರಿಸಲು ತೀರ್ಮಾನಿಸಲಾಗಿದೆ. ಇದೇ ಆವರಣದಲ್ಲಿ ಆಯುಷ್ ವಿಭಾಗವನ್ನು ತೆರೆಯಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಖಾತೆ ಸಚಿವ ಅನಂತಕುಮಾರ್ ಅವರು ಮಾತನಾಡಿ ಸಾರ್ವಜನಿಕರ ಆರೋಗ್ಯ ಸೇವೆಯಲ್ಲಿ ಸರ್ಕಾರಗಳು ಒಮ್ಮತದಿಂದ ಕಾರ್ಯನಿರ್ವಹಿಸಬೇಕು, ಇತ್ತೀಚೆಗೆ ಕೇಂದ್ರ ಸರ್ಕಾರ ಪ್ರಾರಂಭಿಸುವ ಪ್ರಧಾನ ಮಂತ್ರಿ ಜನ ಔಷಧಿ ಮಳಿಗೆಯಲ್ಲಿ ಔಷಧಿಗಳು ಅತ್ಯಂತ ಕಡಿಮೆ ದರದಲ್ಲಿ ದೊರೆಯುತ್ತಿದ್ದು ಸಾರ್ವಜನಿಕರ ಇದರ ಪ್ರಯೋಜನ ಪಡೆಯಬೇಕು. ಕಳೆದ ವರ್ಷ ದೇಶದಲ್ಲಿ ಕೇವಲ 99 ಮಳಿಗೆಗಳಿದ್ದವು. ಪ್ರಸಕ್ತ ಸಾಲಿನಲ್ಲಿ 750 ಮಳಿಗೆಗಳನ್ನು ತೆರೆಯಲಾಗಿದೆ. ಮುಂದಿನ ವರ್ಷದ ಒಳಗಾಗಿ ದೇಶಾದ್ಯಂತ 3000 ಮಳಿಗೆಗಳನ್ನು ತೆರೆಯುವ ಗುರಿಹೊಂದಲಾಗಿದೆ. ಇದರಲ್ಲಿ ಕರ್ನಾಟಕಕ್ಕೆ 200 ಮಳಿಗೆಗಳನ್ನು ಹಂಚಲಾಗಿದೆ.

2016-17 ನೇ ಸಾಲಿನಲ್ಲಿ ಕೇಂದ್ರ ಸರ್ಕಾರ ಕುಟುಂಬ ಕಲ್ಯಾಣ ಹಾಗೂ ಆರೋಗ್ಯ ಸೇವೆಗಳಿಗಾಗಿ 32,061 ಕೋಟಿ ರೂ. ಗಳನ್ನು ನೀಡಲಾಗಿತ್ತು. ಪ್ರಸಕ್ತ ಸಾಲಿನಲ್ಲಿ 47,352

**ಕೋಟಿ ರೂ. ಗಳನ್ನು ನೀಡಲಾಗಿದೆ. ಇದರಲ್ಲಿ ಕರ್ನಾಟಕಕ್ಕೆ ಗಣನೀಯ ಮೊತ್ತ ನೀಡಲಾಗುವುದು. ಸಾರ್ವಜನಿಕರ ಆರೋಗ್ಯ ಭದ್ರತೆಗೆ ಕಟಿಬದ್ಧರಾಗಿದ್ದೇವೆ ಎಂದು ಹೇಳಿದರು.**

**ಕಾರ್ಯಕ್ರಮದಲ್ಲಿ ಜಯನಗರ ಶಾಸಕ ಬಿ.ಎನ್. ವಿಜಯಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಕೆ.ಜೆ. ಜಾರ್ಜ್ ಅವರು ಸೇರಿದಂತೆ ಅನೇಕ ಗಣ್ಯರು ಮತ್ತು ಸ್ಥಳೀಯ ಜನಪ್ರತಿನಿಧಿಗಳು ಭಾಗವಹಿಸಿದ್ದರು**

**ಕೆಎನ್‌ಕೆ:ಜೆಡಿ:ಜಿಪಿಆರ್.**

## ವೃತ್ತಿಪರ ಕೋರ್ಸ್‌ಗಳಲ್ಲಿ ಇಂಟರ್ ಮತ್ತು ಫೈನಲ್ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಆಹ್ವಾನ

**ಬೆಂಗಳೂರು, ಫೆಬ್ರವರಿ 4 , (ಕರ್ನಾಟಕ ವಾರ್ತೆ)**

2016–17ನೇ ಸಾಲಿನ ಆಯವ್ಯಯದಲ್ಲಿ ಪರಿಶಿಷ್ಟ ಪಂಗಡಳ ವಿದ್ಯಾರ್ಥಿಗಳು ಸಿ.ಎ ಐ.ಸಿಡಬ್ಲ್ಯೂಎ/ಕಂಪನಿ ಸೆಕ್ರೆಟರಿ ವೃತ್ತಿಪರ ಕೋರ್ಸ್‌ಗಳಲ್ಲಿ ಇಂಟರ್ ಮತ್ತು ಫೈನಲ್ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಮಂಜೂರು ಮಾಡಲು ಸರ್ಕಾರದ ಆದೇಶವಿದ್ದು, ಈ ಸಂಬಂಧ ಅರ್ಹ ಪರಿಶಿಷ್ಟ ಅರ್ಹ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪ್ರೋತ್ಸಾಹ ಧನ ಮಂಜೂರಾತಿಗಾಗಿ ಅರ್ಜಿಗಳನ್ನು ಸಮಾಜ ಕಲ್ಯಾಣ ಇಲಾಖೆಯ tswdbir.north@gmail.com ವೆಬ್‌ಸೈಟ್‌ನಲ್ಲಿ ಡೌನ್‌ಲೋಡ್ ಮಾಡಿಕೊಂಡು ಭರ್ತಿಮಾಡಿದ ಅರ್ಜಿಯೊಂದಿಗೆ ಸೂಕ್ತ ದಾಖಲಾತಿಗಳನ್ನು ಲಗತ್ತಿಸಿ ಕಚೇರಿಗೆ ಕಳುಹಿಸಬಹುದಾಗಿದೆ.

ಸಿ.ಎ. (ಇನ್ಸ್‌ಟಿಟ್ಯೂಟ್ ಆಫ್ ಚಾರ್ಟೆಡ್ ಅಕೌಂಟೆಂಟ್ಸ್ ಆಫ್ ಇಂಡಿಯಾ ಕೋರ್ಸ್) ಕೋರ್ಸ್ ಮಾಡಿದವರಿಗೆ ಇಂಟರ್ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಪ್ರೋತ್ಸಾಹ ಧನ ಮೊತ್ತ ರೂ 50,000/– ಫೈನಲ್ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಪ್ರೋತ್ಸಾಹಧನದ ಮೊತ್ತ ರೂ 1.00 ಲಕ್ಷ( ಪ್ರತಿ ವಿದ್ಯಾರ್ಥಿಗೆ)

ಐಸಿಡ್ಲ್ಯೂಎ (ಇನ್ಸ್‌ಟಿಟ್ಯೂಟ್ ಆಫ್ ಕಾಸ್ಟ್ ವರ್ಕ್ಸ್ ಅಕೌಂಟ್ಸ್ ಕೋರ್ಸ್ ಕೋಲ್ಕತ್ತ) ಕೋರ್ಸ್ ಮಾಡಿದವರಿಗೆ ಇಂಟರ್ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಪ್ರೋತ್ಸಾಹ ಧನ ಮೊತ್ತ ರೂ 50,000/– ಫೈನಲ್ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಪ್ರೋತ್ಸಾಹಧನದ ಮೊತ್ತ ರೂ 1.00 ಲಕ್ಷ (ಪ್ರತಿ ವಿದ್ಯಾರ್ಥಿಗೆ)

ಕಂಪನಿ ಸೆಕ್ರಟರಿ (ಇನ್ಸ್‌ಟಿಟ್ಯೂಟ್ ಆಫ್ ಕಂಪನಿ ಸೆಕ್ರೆಟರಿ ) ಕೋರ್ಸ್ ಮಾಡಿದವರಿಗೆ ಇಂಟರ್ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಪ್ರೋತ್ಸಾಹ ಧನ ಮೊತ್ತ ರೂ

50,000/- ಫೈನಲ್ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಪ್ರೋತ್ಸಾಹಧನದ ಮೊತ್ತ ರೂ 1.00 ಲಕ್ಷ (ಪ್ರತಿ ವಿದ್ಯಾರ್ಥಿಗೆ)

ಕೆಎನ್‌ಕೆ:ಜಿಪಿಆರ್

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಫೆಬ್ರವರಿ 4 , (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:05-02-2017ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) **ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ" ಎಂಬ ಶೀರ್ಷಿಕೆಯಡಿ ಶ್ರೀ ಸಿದ್ದರಾಜು ಮತ್ತು ತಂಡ, ರಾಂಪುರ, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ ರವರಿಂದ ಜಾನಪದ ಮತ್ತು ತತ್ವ ಗಾಯನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

2) **ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ" ಎಂಬ ಶೀರ್ಷಿಕೆಯಡಿ ಶ್ರೀ ನಾಗೇಂದ್ರ ಮತ್ತು ತಂಡ , ಮಳವಳ್ಳಿ ತಾಲ್ಲೂಕು, ಮಂಡ್ಯ ಜಿಲ್ಲೆ ರವರಿಂದ ಜಾನಪದ ಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

3) **ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

4) **ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.**

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಸಿರಿಷಾ, ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ ಶ್ರೀವಾಣಿ ವಿದ್ಯಾ ಕೇಂದ್ರ , ರಾಜಾಜಿನಗರ, ಬೆಂಗಳೂರು ಕು: ತನುಶ್ರೀ ರವರಿಂದ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 9.00 ಗಂಟೆಯಿಂದ 10.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲಭವನ ಸೊಸೈಟಿ, ಬೆಂಗಳೂರು ರವರ ಸಹಯೋಗದೊಂದಿಗೆ ಶ್ರೀ ಲಾಸ್ಯ ಡ್ಯಾನ್ಸ್ ಸ್ಕೂಲ್ , ಬೆಂಗಳೂರು ರವರಿಂದ ಕೂಚುಪುಡಿ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**II. ಸ್ಥಳ: ಶ್ರೀ ಜಯಚಾಮರಾಜೇಂದ್ರ ಒಡೆಯರ್ ಪ್ರತಿಮೆ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 10.00 ಗಂಟೆಯವರೆಗೆ ಪೋರ್ಟಿಸ್ ಲಾ ಫೆಮಿ ಆಸ್ಪತ್ರೆ , ಬೆಂಗಳೂರು ರವರಿಂದ ಆರೋಗ್ಯ ತಪಾಸಣಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿರುತ್ತದೆ.

**Measles-Rubella Vaccination Campaign from 7th to 28th February**

**Bengaluru, February 4 (Karnataka Information)**

**Karnataka has been selected for Phase 1 of Measles Rubella vaccine introduction along with Tamilnadu, Pondicherry, Goa and Lakshadweep. It reflects the confidence of Government of India on our health system.**

**This will help in achieving the national goal of Measles elimination and Rubella- congenital Rubella syndrome (CRS) control in India by 2020.**

**This new vaccine will help in preventing a number of birth defects in new borns like blindness, deafness, congenital heart defects and mental retardation that can be caused by Rubella infection in early pregnancy.**

**Under routine immunization all children in our state are now receiving 2 doses of Measles vaccine at 9-12 months and 16-24 months of age. Both**

these doses will be replaced by "combined Measles Rubella vaccine" from February.

Before introduction of this combined MR vaccine, a campaign is being planned in which all children between 9 months up to 15 years will be vaccinated with one dose of MR vaccine. We are targeting to immunize 1.65 crore children in Karnataka.

Measles Rubella Campaign planned from 7th to 28th February in Karnataka.

During 3 weeks of MR campaign, all children will receive one dose of MR vaccine independent of their earlier vaccination status.

The campaign aims to cover all eligible children in schools throughout Karnataka in the 1st week of campaign followed by children in villages, urban wards and migratory population. Efforts will be done to cover all migratory children especially children of labourers at slums, construction sites, brick factories etc.,

Department convergence: health and Family Welfare, Education, Women and Child Development, Social Welfare, Urban Development, RDPR, Minorities Welfare, Backward Classes Welfare, Labour Department, Information and broadcasting and others.

WHO, UNICEF, Lions, Red Cross, Rotary, Indian Academy Pediatrics, Indian Medical Association, Private School management Association are supporting the campaign.

**"Karnataka is committed to Measles Elimination and Rubella control by year 2020".**

## ಫಲಿತಾಂಶ ಪ್ರಕಟ

ಬೆಂಗಳೂರು, ಫೆಬ್ರವರಿ 4 , (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗ ಅಧಿಸೂಚನೆ 5–10–2016 ಹಾಗೂ ಸೇರ್ಪಡೆ ಅಧಿಸೂಚನೆ ದಿನಾಂಕ: 22–10–2016 ಗಳಲ್ಲಿ ಅಧಿಸೂಚಿಸಲಾದ ವಿವಿಧ ಗ್ರೂಫ್ ಸಿ ತಾಂತ್ರಿಕೇತರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ 10–12–2016 ರಂದು ನಡೆಸಲಾದ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯ ಫಲಿತಾಂಶವನ್ನು ಆಯೋಗದ ಅಂತರ್ಜಾಲ http://kpsc.kar.nic.in/Results ದಲ್ಲಿ ಪ್ರಕಟಿಸಿದೆ.

## ಸಚಿವರ ಪ್ರವಾಸ

ಬೆಂಗಳೂರು, ಫೆಬ್ರವರಿ 4 , (ಕರ್ನಾಟಕ ವಾರ್ತೆ)

ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವೆ ಶ್ರೀಮತಿ ಉಮಾಶ್ರೀ ಅವರು ಫೆಬ್ರವರಿ 4 ರಿಂದ 6 ರವರೆಗೆ ಬೆಳಗಾವಿ, ಬಾಗಲಕೋಟೆ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳುವರು.